**All India Radio: Bangalore**
**Regional Bulletin In Kannada**
**25.05.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಬಿಜೆಪಿಯ ಹದಿನೆಂಟು ಶಾಸಕರ ಅಮಾನತು ಆದೇಶ ಹಿಂಪಡೆದ ಸಭಾಧ್ಯಕ್ಷ ಯು.ಟಿ. ಖಾದರ್
2. ದೇಶಾದ್ಯಂತ ಸೇನೆಗೆ ಗೌರವ ಸಲ್ಲಿಸಿದ ತಿರಂಗಾ ಯಾತ್ರೆ ಬಗ್ಗೆ ಮನ್ ಕೀ ಬಾತ್‌ನಲ್ಲಿ ಪ್ರಧಾನಿ ಶ್ಲಾಘನೆ
3. ಬಸವಣ್ಣನವರ ತತ್ವಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಬಡತನ ನಿರ್ಮೂಲನೆ - ಸಚಿವ ಈಶ್ವರ ಖಂಡ್ರೆ
4. ವಾಡಿಕೆಗಿಂತ ಮೊದಲೇ ರಾಜ್ಯಕ್ಕೆ ಮುಂಗಾರು ಪ್ರವೇಶ -ಧಾರಾಕಾರ ಮಳೆಯಿಂದ ರಾಜ್ಯದ ಹಲವೆಡೆ ಜನಜೀವನ ಅಸ್ತವ್ಯಸ್ತ

<><><><>

ಬಿಜೆಪಿಯ ೧೮ ಶಾಸಕರ ಅಮಾನತು ಆದೇಶವನ್ನು ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್ ಹಿಂಪಡೆದಿದ್ದಾರೆ. ವಿಧಾನಸಭೆ ಸಭಾಧ್ಯಕ್ಷರ ನೇತೃತ್ವದಲ್ಲಿ ಇಂದು ನಡೆದ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಾನೂನು ಸಚಿವ ಎಚ್.ಕೆ. ಪಾಟೀಲ್, ಪ್ರತಿಪಕ್ಷ ನಾಯಕ ಅಶೋಕ, ವಿಧಾನಸಭೆ ಉಪಾಧ್ಯಕ್ಷ ರುದ್ರಪ್ಪ ಲಮಾಣಿ, ಪಾಲ್ಗೊಂಡಿದ್ದರು. ಸಭೆಯಲ್ಲಿ ಚರ್ಚಿಸಿದ ಬಳಿಕ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ವಿಧಾನಸಭಾ ಅಧೀವೇಶನದಲ್ಲಿ ಸಭಾಧ್ಯಕ್ಷರ ಪೀಠಕ್ಕೆ ಅಗೌರವ ತೋರಿದ ಆರೋಪದ ಮೇಲೆ ಬಿಜೆಪಿಯ ೧೮ ಶಾಸಕರನ್ನು ೬ ತಿಂಗಳು ಕಾಲ ಅಮಾನತುಗೊಳಿಸಲಾಗಿತ್ತು. ಅಮಾನತು ಆದೇಶ ಹಿಂಪಡೆಯುವಂತೆ ಬಿಜೆಪಿ ನಿಯೋಗ ರಾಜ್ಯಪಾಲರಿಗೆ ಮನವಿ ಮಾಡಿತ್ತು. ರಾಜ್ಯಪಾಲರು ಅಮಾನತು ಆದೇಶ ಪರಿಶೀಲನೆ ನಡೆಸುವಂತೆ ಸಭಾಧ್ಯಕ್ಷರು ಹಾಗೂ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದರು.

<><><>

ಭಯೋತ್ಪಾದನೆಯ ವಿರುದ್ಧ ಭಾರತ ಒಗ್ಗೂಡಿ ನಿಂತಿದ್ದು, ಭಯೋತ್ಪಾದನೆಯನ್ನು ಕೊನೆಗೊಳಿಸಲೇಬೇಕು ಎಂಬುದು ಪ್ರತಿಯೊಬ್ಬ ಭಾರತೀಯನ ಸಂಕಲ್ಪವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ತಮ್ಮ ಮನದಾಳದ ಮಾತನ್ನು ಹಂಚಿಕೊಂಡಿದ್ದಾರೆ. 'ಆಪರೇಷನ್ ಸಿಂಧೂರ್' ಕೇವಲ ಮಿಲಿಟರಿ ಕಾರ್ಯಾಚರಣೆಯಲ್ಲ, ಇದು ದೇಶದ ಜನರ ದೃಢನಿಶ್ಚಯ ಧೈರ್ಯ ಮತ್ತು ಬದಲಾಗುತ್ತಿರುವ ಭಾರತದ ಚಿತ್ರಣವಾಗಿದೆ ಎಂದು ಪ್ರಧಾನಿ ಅಭಿಪ್ರಾಯಪಟ್ಟಿದ್ದಾರೆ. ಸಾವಿರಾರು ಜನರು ಕೈಯಲ್ಲಿ ತ್ರಿವರ್ಣ ಧ್ವಜ ಹಿಡಿದು ದೇಶದ ಸೇನೆಗೆ ಗೌರವ ಸಲ್ಲಿಸಲು ಮುಂದೆ ಬಂದಿದ್ದರು. ಅನೇಕ ನಗರಗಳಲ್ಲಿ, ಹೆಚ್ಚಿನ ಸಂಖ್ಯೆಯ ಯುವಕರು ನಾಗರಿಕ ರಕ್ಷಣಾ ಸ್ವಯಂಸೇವಕರಾಗಲು ಒಗ್ಗೂಡಿದರು ಎಂದು ಪ್ರಧಾನಿ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

ಧ್ವನಿ - ಪ್ರಧಾನಿ ನರೇಂದ್ರ ಮೋದಿ(ತಿರಂಗಾ)

ಯೋಗ ದಿನಾಚರಣೆ ಜೊತೆಗೆ ಆಯುರ್ವೇದ ಕ್ಷೇತ್ರದಲ್ಲಿ ಬಹಳಷ್ಟು ಸಂಶೋಧನೆಗಳು ನಡೆಯುತ್ತಿದ್ದು, ಅವುಗಳ ಬಗ್ಗೆ ಅರಿತಾಗ ಸಂತಸವಾಗುತ್ತದೆ. ವಿಶ್ವ ಆರೋಗ್ಯ ಸಂಸ್ಥೆಯ ಮಹಾನಿರ್ದೇಶಕ ತುಳಸಿಯವರ ಸಮ್ಮುಖದಲ್ಲಿ ಒಂದು ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಈ ಉಪಕ್ರಮದಿಂದ ಹೆಚ್ಚು ಜನರಿಗೆ ವೈಜ್ಞಾನಿಕ ರೀತಿಯಲ್ಲಿ ಆಯುಷ್‌ಗೆ ಅವಕಾಶ ದೊರೆಯಲು ಸಹಾಯವಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

**ಧ್ವನಿ - ಪ್ರಧಾನಿ ನರೇಂದ್ರ ಮೋದಿ(ಆಯುರ್ವೇದ)**

ಇದೇ ವೇಳೆ ಈಗ ಕೆಲವು ಶಾಲೆಗಳಲ್ಲಿ ಶುಗರ್ ಬೋರ್ಡ್ ಹಾಕಲಾಗುತ್ತಿದೆ. ಇದರ ಉದ್ದೇಶ ಮಕ್ಕಳಿಗೆ ಸಕ್ಕರೆ ಸೇವನೆ ಬಗ್ಗೆ ಜಾಗೃತಿ ಮೂಡಿಸುವುದು. ಬಾಲ್ಯದಿಂದಲೇ ಮಕ್ಕಳು ಆರೋಗ್ಯಕರ ಜೀವನಶೈಲಿಯ ಅಭ್ಯಾಸ ಮಾಡಿಕೊಳ್ಳುವಂತೆ ಪ್ರಧಾನಿ ಕರೆ ನೀಡಿದ್ದಾರೆ. ಅಂತಾರಾಷ್ಟ್ರೀಯ ಯೋಗದಿನ'ಕ್ಕೆ ಕೆಲವೇ ದಿನ ಬಾಕಿಯಿದ್ದು ಯೋಗಾಭ್ಯಾಸದಿಂದ ದೂರವಿದ್ದರೆ ಕೂಡಲೇ ಯೋಗಾಭ್ಯಾಸ ಆರಂಭಿಸಿ ಎಂದು ಕರೆ ನೀಡಿದ್ದಾರೆ. ಸ್ವಚ್ಛ ಭಾರತ ಅಭಿಯಾನ ಈಗ ಕೇವಲ ನಗರಗಳ ಮಟ್ಟಕ್ಕೆ ಸೀಮಿತವಿಲ್ಲ, ಇದು ಪರ್ವತ ಶಿಖರಗಳವರೆಗೆ ವಿಸ್ತರಿಸಿದೆ. ದೇಶದ ತ್ಯಾಜ್ಯ ವಿಲೇವಾರಿ ಸ್ಥಳಗಳಲ್ಲಿ ಬಹುಪಾಲು ಕಾಗದದ ತ್ಯಾಜ್ಯವಿದೆ. ಒಂದು ಟನ್ ಕಾಗದವನ್ನು

ಮರುಬಳಕೆ ಮಾಡುವುದರಿಂದ ೧೭ ಮರಗಳು ಮತ್ತು ಸಾವಿರಾರು ಲೀಟರ್ ನೀರನ್ನು ಉಳಿಸಬಹುದು ಎಂದು ತಿಳಿಸಿದ್ದಾರೆ.

<><><>

ವಿಶ್ವಗುರು ಬಸವಣ್ಣನವರ ತತ್ವಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಬಡತನವೇ ಇರುವುದಿಲ್ಲ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ. ನಂಜನಗೂಡಿನಲ್ಲಿಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಆಯೋಜಿಸಿದ್ದ, ಬಸವ ಜಯಂತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಬಸವಣ್ಣನವರು ಕಾಯಕವೇ ಕೈಲಾಸ ಎಂದು ಸಾರುವ ಮೂಲಕ ದುಡಿಮೆಯ ಹಿರಿಮೆಯನ್ನು ಸಾರಿದ್ದರು. ದುಡಿಮೆಗೆ ಬೆಲೆ ನೀಡಿದರೆ ಬಡತನ ನಿರ್ಮೂಲನೆ ಸಾಧ್ಯ ಎಂದು ತಿಳಿಸಿದ್ದಾರೆ. ಬುದ್ಧ, ಬಸವ, ಅಂಬೇಡ್ಕರ್ ಮೊದಲಾದ ಮಹಾಪುರುಷರು ಯಾವುದೇ ಒಂದು ಜಾತಿಗೆ ಸೀಮಿತರಲ. ಅವರು ಇಡೀ ಮಾನವಕುಲಕ್ಕೇ ಮಾದರಿ ಇಂತಹ ಮಹಾಪುರಷರ ಜಯಂತಿ ಆಚರಿಸುವ ಮೂಲಕ ನಾವು ಅವರ ಆದರ್ಶ ಅಳವಡಿಸಿಕೊಂಡರೆ ಈ ಆಚರಣೆಗೆ ಅರ್ಥ ಬರುತ್ತದೆ ಎಂದು ಸಚಿವರು ಹೇಳಿದ್ದಾರೆ.

<><><>

ರಾಜಕೀಯ ಅಧ್ಯಯನಕ್ಕೆ ಪ್ರತ್ಯೇಕ ಕಾಲೇಜು ಸ್ಥಾಪಿಸಲು ಸರ್ಕಾರ ಚಿಂತನೆ ನಡೆಸಿದ್ದು ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿ, ನಿರ್ಧಾರ ಕೈಗೊಳ್ಳಲಾಗುವುದು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ. ಪ್ರವಾಸೋದ್ಯಮ ಇಲಾಖೆ ಆಯೋಜಿಸಿದ್ದ ವಿಧಾನಸೌಧ ಪ್ರವಾಸಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ವಿದ್ಯಾರ್ಥಿಗಳಾಗಿದ್ದಾಗ ವಿಧಾನಸೌಧ ನೋಡಲು ಬರುತ್ತಿದ್ದೆವು ಎಂದು ಹಳೆ ದಿನಗಳನ್ನು ಮೆಲುಕು ಹಾಕಿದರು. ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಮಾತನಾಡಿ, ವಿದ್ಯಾರ್ಥಿಗಳಿಗೆ ಇತಿಹಾಸವನ್ನು ಅರ್ಥ ಮಾಡಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗಗಳು ಹೇಗೆ ಕಾರ್ಯನಿರ್ವಹಿಸುತ್ತವೆ ಎಂಬುದನ್ನು ಜನರಿಗೆ ತಿಳಿಸಿಕೊಡುವ ಸಲುವಾಗಿ ಈ ಕಾರ್ಯಕ್ರಮ ರೂಪಿಸಲಾಗಿದೆ ಎಂದು ಹೇಳಿದ್ದಾರೆ. ಸಚಿವ ಎಚ್ ಕೆ ಪಾಟೀಲ್ ಮಾತನಾಡಿ, ವಿಧಾನಸೌಧ ಪ್ರವಾಸ ಕೇವಲ ಮನರಂಜನೆಯಲ್ಲ. ಇಲ್ಲಿಗೆ ಬಂದವರು ಜ್ಞಾನ ಪಡೆದು ಹೋಗಬೇಕು ಎಂದು ಸಲಹೆ ನೀಡಿದ್ದಾರೆ.

<><><><>

ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಕರಾವಳಿಗೆ ಈ ಬಾರಿ ವಾಡಿಕೆಗಿಂತ ಮುನ್ನವೇ ಮುಂಗಾರು ಪ್ರವೇಶವಾಗಿದೆ. ಇಂದು ಬೆಳಗ್ಗಿನಿಂದಲೇ ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗುತ್ತಿದೆ. ಮಳೆಯ ಜೊತೆಗೆ ಭಾರೀ ಗಾಳಿಯ ಪರಿಣಾಮವಾಗಿ ಹಲವೆಡೆ ಮರಗಳು ಧರೆಗುರುಳಿವೆ. ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಜಿಲ್ಲೆಯ ನೇತ್ರಾವತಿ, ಕುಮಾರಧಾರಾ, ಫಲ್ಗುಣಿ ನದಿಗಳು ತುಂಬಿ ಹರಿಯುತ್ತಿವೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಇಂದು ಮುಂಜಾನೆಯಿಂದ ಧಾರಕಾರ ಮಳೆಯಾಗುತ್ತಿದು ಜನ ಜೀವನ ಬಾಧಿತಗೊಂಡಿದೆ. ಮಳೆಯಿಂದಾಗಿ ಹಲವೆಡೆ ಹಾನಿ ಸಂಭವಿಸಿದೆ. ಚಿಕ್ಕಮಗಳೂರು, ಮೂಡಿಗೆರೆ, ಕೊಟ್ಟಿಗೆಹಾರ, ಕೊಪ್ಪ, ಕಳಸ, ಹೊರನಾಡು, ಶೃಂಗೇರಿ, ಕಲ್ಲತಗಿರಿ ಸೇರಿದಂತೆ ಹಲವೆಡೆ ಹೆಚ್ಚಿನ ಮಳೆಯಾಗುತ್ತಿದೆ. ಗಾಳಿ ಸಹಿತ ಮಳೆಯಿಂದಾಗಿ ಕೊಪ್ಪ ತಾಲೂಕಿನ ಕೊಗ್ರೆ ಗ್ರಾಮದ ಸಮೀಪ ಆಟೋ ರಿಕ್ಷಾದ ಮೇಲೆ ಬೃಹತ್ ಮರ ಉರುಳಿಬಿದ್ದು ಚಾಲಕ ಸ್ಥಳದಲ್ಲಿಯೆ ಮೃತಪಟ್ಟಿದ್ದಾರೆ. ಮಳೆಯಿಂದಾಗಿ ಸರಿಯಾಗಿ ರಸ್ತೆ ಕಾಣದೆ ಮೂಡಿಗೆರೆ ತಾಲೂಕಿನಲ್ಲಿ ಹೇಮಾವತಿ ಉಪ ನದಿಗೆ ೨ ಕಾರುಗಳು ಇಂದು ಉರುಳಿಬಿದ್ದಿದ್ದು ಕಾರಿನಲ್ಲಿದವರನ್ನು ರಕ್ಷಿಸಲಾಗಿದೆ. ಇನಾಂ ದತ್ತ ಪೀಠಕ್ಕೆ ಸಾಗುವ ಕವಿಕಲ್ ಗಂಡಿ ರಸ್ತೆಯ ಬಳಿ ಭೂ ಕುಸಿತ ಉಂಟಾಗಿದ್ದು ಅಧಿಕಾರಿಗಳು ತೆರಳಿ ಪರಿಶೀಲನೆ ನಡೆಸಿದ್ದಾರೆ. ಚಿಕ್ಕಮಗಳೂರು ಮೂಡಿಗೆರೆ, ಬಾಳೆಹೊನ್ನೂರು ಸುತ್ತಮುತ್ತ ಹಲವೆಡೆ ಮರಗಳು ವಿದ್ಯುತ್ ಕಂಬಗಳು ಉರುಳಿಬಿದ್ದು ವಿದ್ಯುತ್ ಸಮಸ್ಯೆ ಉಂಟಾಗಿದೆ. ಮಡಿಕೇರಿ ತಲಕಾವೇರಿ ಭಾಗಮಂಡಲ ಸೇರಿದಂತೆ ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆ ಮುಂದುವರೆದಿದೆ. ಭಾರೀ ಮಳೆಯಿಂದಾಗಿ ಕೊಡಗಿನಲ್ಲಿ ಸಾಮಾನ್ಯ ಜನಜೀವನ ವ್ಯತ್ಯಯಗೊಂಡಿದೆ. ಗ್ರಾಮೀಣ ಭಾಗದ ರಸ್ತೆ ಸಂಚಾರ ಕಡಿತಗೊಂಡಿದೆ. ಕಳೆದ ೨೪ ಗಂಟೆಗಳಲ್ಲಿ ಭಾಗಮಂಡಲಕ್ಕೆ ದಾಖಲೆಯ ೧೬೮ ಮಿಲಿಮೀಟರ್ ಗಳಷ್ಟು ಮಳೆಯಾಗಿದೆ. ಕಳೆದ ಮೂರು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಹಾರಂಗಿ ಜಲಾಶಯಕ್ಕೂ ನೀರಿನ ಹರಿವು ಹೆಚ್ಚಾಗಿದೆ.

<><><><>

ರಾಜ್ಯದ್ಯಾಂತ ಇಂದಿನಿಂದ ಮಳೆ ಚುರುಕುಗೊಂಡಿದ್ದು ಕರಾವಳಿ ಸೇರಿ ೬ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಗಾಳಿ

ಸಮೇತ ಭಾರೀ ಮಳೆಯಾಗುವ ಮುನ್ನೆಚ್ಚರಿಕೆ ನೀಡಲಾಗಿದೆ. ಬೆಳಗಾವಿ, ಧಾರವಾಡ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್, ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ, ಹಾವೇರಿ, ಗದಗ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ವಿಜಯನಗರ, ಯಾದಗಿರಿ, ರಾಯಚೂರು, ಕೊಪ್ಪಳ, ಬೀದರ್‌ನಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು, ಹಗುರದಿಂದ ಸಾಧಾರಣಾ ಮಳೆಯಾಗುವ ಸಾಧ್ಯತೆ. ಕೊಟ್ಟಿಗೆಹಾರ ೨೧ ಸೆಂಟಿಮೀಟರ್, ಆಗುಂಬೆ, ಭಾಗಮಂಡಲ ೧೭, ಉಡುಪಿ ೧೪. ಪುತ್ತೂರಿನಲ್ಲಿ ೧೩ ಸೆಂಟಿಮೀಟರ್ ಮಳೆಯಾಗಿದೆ.

<><><><>

ಸ್ವಚ್ಛತಾ ಪಾಕ್ಷಿಕ ೨೦೨೫ ರ ಭಾಗವಾಗಿ  ವಿಜಯಪುರದ ಕೂಡ್ಗಿಯ ನ್ಯಾಷನಲ್ ಥರ್ಮಲ್ ಪವರ್ ಕಾರ್ಪೋರೇಷನ್ ಇಂದು ಸ್ವಚ್ಛತಾ ಪ್ರತಿಜ್ಞೆ, ವಾಕಥಾನ್ ಹಾಗೂ ಶ್ರಮದಾನ ಚಟುವಟಿಕೆಗಳನ್ನು ಹಮ್ಮಿಕೊಂಡಿತ್ತು.  ಕಾರ್ಯಕ್ರಮದಲ್ಲಿ ಎನ್‌ಟಿಪಿಸಿಯ ಕಾರ್ಯನಿರ್ವಾಹಕ ನಿರ್ದೇಶಕ ಬಿದ್ಯಾ ನಂದ್ ಝಾ, ಜನರಲ್ ಮ್ಯಾನೇಜರ್ ಸಂತೋಷ್ ತಿವಾರಿ ಮತ್ತು ಇತರ ಹಿರಿಯ ಅಧಿಕಾರಿಗಳು ಎನ್‌ಟಿಪಿಸಿಯ ನೌಕರರು ಹಾಗೂ ವಿದ್ಯಾರ್ಥಿಗಳು ಸೇರಿದಂತೆ ೧೫೦ ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ಇದೇ ತಿಂಗಳ ೧೬ ರಂದು ಆರಂಭವಾಗಿ ೩೧ ರವರೆಗೆ ನಡೆಯುವ ಈ ಕಾರ್ಯಕ್ರಮವು ಸ್ವಚ್ಛತೆ ಮತ್ತು ಸಮುದಾಯದ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>